**ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ  ನ್ಯಾಯಾಲಯ,**

**ಹಾನಗಲ್**

**CC No.35/2022**

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಮಹಾಂತೇಶ ಲಂಬಿ | ಪಿಡಬ್ಲ್ಯೂ | 05 |
| ತಂದೆ ಹೆಸರು | : | ಕಲ್ಲಪ್ಪ | ಸಿ ಡಬ್ಲ್ಯೂ | 15 |
| ವಯಸ್ಸು | : | 43 ವರ್ಷ | | |
| ಉದ್ಯೋಗ | : | ಸಿಪಿಐ ಸೊರಬ  ಪೋಲಿಸ್ ಠಾಣೆ | | |
| ವಾಸ ಸ್ಥಳ | : | ಸೊರಬ | | |

**ದಿನಾಂಕ: 15.04.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

ದಿಃ 12.07.2021 ರಿಂದ 26.07.2021 ರವರೆಗೆ ಪ್ರಭಾರ ಹಾನಗಲ್ ಸಿಪಿಐ  ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 18.07.2021 ರಂದು ಪ್ರಕರಣದ ಕಡತವನ್ನು ಚಾಸಾ–14 ರವರಿಂದ ಪಡೆದು ತನಿಖೆ ಮುಂದುವರೆಸಿರುತ್ತೇನೆ. ಅದೇ ದಿನ ಚಾಸಾ–1 ರವರ ಸಮಕ್ಷಮ ಚಾಸಾ–2 ಮತ್ತು 3 ರವರ ಸಮಕ್ಷಮ ಘಟನಾ ಸ್ಥಳದ ಪಂಚನಾಮೆಯನ್ನು ಮದ್ಯಾಹ್ನ 2.00 ರಿಂದ 3.00 ರವರೆಗೆ ಜರುಗಿಸಿರುತ್ತೇನೆ. ಸದರಿ ಪಂಚನಾಮೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ–2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ–2 ಡಿ ಎಂದು ಗುರುತಿಸಲಾಯಿತು. ಹಾಗೂ  ಸದರಿ ಸಮಯದಲ್ಲಿ ಠಾಣಾ ಸಿಬ್ಬಂದಿಯವರ ಮೂಲಕ ಘಟನಾ ಸ್ಥಳದ ಪೋಟೋವನ್ನು ಹಾಗೂ ಕಚ್ಚಾನಕ್ಷೆಯನ್ನು ತಯಾರಿಸಿರುತ್ತೇನೆ. ಸದರಿ ಪೋಟೋ ಹಾಗೂ ಕಚ್ಚಾನಕ್ಷೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿಪಿ–3 ಮತ್ತು 4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ–3 ಎ ಮತ್ತು 4 ಎ ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ–14 ಮತ್ತು ಠಾಣಾ ಸಿಬ್ಬಂದಿ, ಆರೋಪಿ ಮತ್ತು ಆಟೋ ಹಾಜರುಪಡಿಸಿದ್ದು ಆರೋಪಿಯನ್ನು ವಿಚಾರಣೆ ಮಾಡಿ ಆತನ ಸ್ವಇಚ್ಛಾ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ. ಸದರಿ ಸ್ವಇಚ್ಛಾ ಹೇಳಿಕೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು

ಈಗಾಗಲೇ ನಿಪಿ- 12 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ- 12 ಎ ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ-4 ಮತ್ತು 5 ರವರ ಸಮಕ್ಷಮ ಸದರಿ ಆಟೋ ಸಂಖ್ಯೆ ಕೆಎ-25 ಎಎ - 2310 ವನ್ನು ಪಂಚನಾಮೆ ಜರುಗಿಸುವುದವರ ಮೂಲಕ ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಆಟೋವನ್ನು ಪಂಚನಾಮೆ ಕಾಲಕ್ಕೆ ಆರೋಪಿ ಗುರುತಿಸಿರುತ್ತಾನೆ. ಸದರಿ ಪಂಚನಾಮೆ ಕಾಲಕ್ಕೆ ಆಟೋಗೆ ಸಂಬಂಧಿಸಿದ ಫೊಟೋಗಳನ್ನು ತೆಗೆಯಿಸಿರುತ್ತೇನೆ. ಸದರಿ ಪಂಚನಾಮೆಯನ್ನು ನಿಪಿ- 13 ಎಂದು ಸಾಕ್ಷಿಯ ಸಹಿಯನ್ನು ನಿಪಿ- 13 ಎ ಎಂದು ಗುರುತಿಸಲಾಯಿತು. ಹಾಗೂ 5 ಫೊಟೋಗಳನ್ನು ಒಟ್ಟಾಗಿ ನಿಪಿ- 14 ಎಂದು ಸಾಕ್ಷಿಯ ಸಹಿಯನ್ನು ನಿಪಿ- 14 ಎ ಎಂದು ಗುರುತಿಸಲಾಯಿತು.

ಹಾಗೂ ಅದೇ ದಿನ ಆರೋಪಿಯನ್ನು ದಸ್ತಗಿರಿ ನಿಯಮ ಪಾಲಿಸಿ ಸಿಬ್ಬಂದಿ ಮೂಲಕ ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ಹಾಗೂ ಅದೇ ದಿನ ಚಾಸಾ-9 ರಿಂದ 12 ಮತ್ತು 14 ರವರ ಹೇಳಿಕೆಗಳನ್ನು ದಾಖಲಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ- 12 ರವರಿಂದ 65 ಬಿ ಪ್ರಮಾಣ ಪತ್ರವನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಪ್ರಮಾಣಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ- 15 ಎಂದು ಸಾಕ್ಷಿಯ ಸಹಿಯನ್ನು ನಿಪಿ- 15 ಎ ಎಂದು ಗುರುತಿಸಲಾಯಿತು. ಹಾಗೂ ಅದೇ ದಿನ ಚಾಸಾ- 1 ರವರು ಆಟೋವಿನ ಆರ್ ಸಿ ಕಾರ್ಡನ ಸೆಲ್ಫ ಅಟೆಸ್ಟೆಂಡ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಪ್ರತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ- 16 ಎಂದು ಸಾಕ್ಷಿಯ ಸಹಿಯನ್ನು ನಿಪಿ- 16 ಎ ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ- 13 ರವರಿಗೆ ಘಟನಾ ಸ್ಥಳದ ನಕಾಶೆಯನ್ನು ತಯಾರಿಸಿಕೊಡುವಂತೆ ಮನವಿ ಪತ್ರ ಸಲ್ಲಿಸಿರುತ್ತೇನೆ. ಸದರಿ ಮನವಿ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ- 17 ಎಂದು ಸಾಕ್ಷಿಯ ಸಹಿಯನ್ನು ನಿಪಿ- 17 ಎ ಎಂದು ಗುರುತಿಸಲಾಯಿತು. ಹಾಗೂ ಪ್ರಕರಣದ ಮುಂದಿನ ತನಿಖೆಯನ್ನು ದಿಃ 26.07.2021 ರಂದು ಚಾಸಾ- 16 ರವರಿಗೆ ವಹಿಸಿಕೊಟ್ಟಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸಬಲ್ಲೆ. ಆರೋಪಿ ಗೈರು ಹಾಜರು ಇರುತ್ತಾನೆ. ಸಾಕ್ಷಿ ನಿಪಿ- 14 ರಡಿಯಲ್ಲಿರುವ ಆಟೋವನ್ನು ನೋಡಿ ಗುರುತಿಸಿರುತ್ತಾರೆ.

**:ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಆರೋಪಿ ಹಾಗೂ ಅವರ ಪರ ವಕೀಲರು ಗೈರು ಹಾಜರು ಇದ್ದು ಪಾಟೀ ಸವಾಲು ಇಲ್ಲ ಅಂತಾ ತೆಗೆದುಕೊಳ್ಳಲಾಯಿತು.

: ಮರುವಿಚಾರಣೆ : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ ಹಾನಗಲ್

ಈಗ ಸಾಕ್ಷಿಗೆ ನಿಪಿ–1 ದೂರನ್ನು ತೋರಿಸಿದ್ದು ಸದರಿ ದೂರಿನ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಸದರಿ ಸಹಿಯನ್ನು ನಿಪಿ–1 ಎ ಎಂದು ಗುರುತಿಸಲಾಯಿತು.